ಚಾಮರಾಜನಗರದಲ್ಲಿ ಪರಿಶಿಷ್ಟ ಜಾತಿಯವರಿಗೆ ವಿದ್ಯಾರ್ಥಿನಿಲಯದ ಕಟ್ಟಡದ ಬಗ್ಗೆ.

858 - ಶ್ರೀ ಕೆ. ಸಿದ್ದಯ್ಯ (ಸಂತೇಮಾರನಹಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರದಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಪದವಿಪೂರ್ವ ವಿದ್ಯಾರ್ಥಿಗಳು ಹಾಸ್ಟೆಲ್ ಸೌಲಭ್ಯವಿಲ್ಲದೆ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರ ಇವರ ಕೋರಿಕೆಯನ್ನು ಪರಿಗಣಿಸುವುದೇ?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಹಾಲಿ ಮೈಸೂರು ವಿಶ್ವವಿದ್ಯಾಲಯದಿಂದ ನಡೆಯುತ್ತಿರುವ ಹಾಸ್ಟೆಲ್ ಕಟ್ಟಡದ ಮೇಲೆ ಮೊದಲನೆಯ ಮಹಡಿಯನ್ನು ನಿರ್ಮಿಸಿ, ವಿದ್ಯಾರ್ಥಿಗಳಿಗೆ ಹೆಚ್ಚುವರಿ ಹಾಸ್ಟೆಲ್ ಸೌಲಭ್ಯ ಕಲ್ಪಿಸಲು 33 ಕೊಠಡಿಗಳನ್ನು ಕಟ್ಟಲು ರೂ. 14.63 ಲಕ್ಷ ರೂ.ಗಳನ್ನು

ಬಿಡುಗಡೆ ಮಾಡಲು ಸರ್ಕಾರದವನ್ನು ವಿಶ್ವವಿದ್ಯಾನಿಲಯವು ಕೋರಿದ್ದು ಪರಿಶೀಲನೆಯಲ್ಲಿದೆ.

ಚಾಮರಾಜನಗರ ತಾಲ್ಲೂಕಿನ ಕುಡೇರಿನ ಪಿ.ಯು.ಸಿ. ವಿದ್ಯಾರ್ಥಿನಿಲಯದ ಬಗ್ಗೆ.

859 - ಶ್ರೀ ಕೆ. ಸಿದ್ದಯ್ಯ (ಸಂತೇಮಾರನಹಳ್ಳಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ತಾಲ್ಲೂಕು ಕುಡೇರಿನ ಸಾರ್ವಜನಿಕರಿಂದ ಹಾಗೂ ಪ್ರಾಚಾರ್ಯರು ಪದವಿಪೂರ್ವ ಕಾಲೇಜು ಹಾಗೂ ವಾಣಿಜ್ಯ ಪ್ರಾಚಾರ್ಯರುಗಳಿಂದ ಕುಡೇರಿನಲ್ಲಿ ಮೆಟ್ರಿಕ್‌ನಂತರದ ವಿದ್ಯಾರ್ಥಿನಿಲಯ ಕಟ್ಟಡ ಕಟ್ಟುವ ಸಲುವಾಗಿ ಅರ್ಜಿಗಳು ಬಂದಿರುವುದು ನಿಜವೇ?

ಆ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಇ) ಇಲ್ಲದಿದ್ದಲ್ಲಿ ಸರ್ಕಾರ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿನಿಲಯ ಕಟ್ಟಡವನ್ನು ಕೂಡಲೇ ಕಟ್ಟುವುದೇ?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು

ಆ)ಮತ್ತು ಇ) ವಸತಿನಿಲಯದ ಕಟ್ಟಡಕ್ಕೆ ಸೂಕ್ತ ನಿವೇಶನವನ್ನು ಪಡೆಯಲು ಕ್ರಮ ಕೈಗೊಳ್ಳಲಾಗಿದೆ. ನಿವೇಶನ ಪಡೆದ ನಂತರ, ಕಟ್ಟಡ ಕಟ್ಟುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.